# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 352
ಮಾನ್ಯ ಸದಸ್ಯರ ಹೆಸರು : ಶ್ರೀ ರಮೇಶ್ ಬಾಬು .
(ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 29/01/2026
ಉತ್ತರಿಸುವ ಸಚಿವರು: : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೌಕರರಿಗೆ ಸಂಬಂಧಪಟ್ಟಂತೆ ಸಿ ಅಂಡ್ ಆರ್ ನಿಯಮಗಳನ್ನು ತಿದ್ದುಪಡಿ ಮಾಡಿ ಎಷ್ಟು ವರ್ಷ ಆಗಿರುತ್ತದೆ;<br><br>ಪ್ರಸ್ತುತ ಕಾಲಘಟ್ಟಕ್ಕೆ ಅನುಗುಣವಾಗಿ ನೌಕರರ ನಿಯಮಾವಳಿಗಳನ್ನು ಬದಲಾವಣೆ ಮಾಡುವ ಉದ್ದೇಶ ರಾಜ್ಯ ಸರ್ಕಾರಕ್ಕೆ ಇರುತ್ತದೆಯೇ : | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೌಕರರಿಗೆ ಸಂಬಂಧಪಟ್ಟಂತೆ ಸಿ ಅಂಡ್ ಆರ್ ನಿಯಮಗಳನ್ನು 1978ರಲ್ಲಿ ರಚಿಸಲಾಗಿದ್ದು, 2008ರಲ್ಲಿ ಉಪನಿರ್ದೇಶಕರ ವೃಂದಕ್ಕೆ ಸಂಬಂಧಪಟ್ಟಂತೆ ಮಾತ್ರ ತಿದ್ದುಪಡಿ ಮಾಡಲಾಗಿರುತ್ತದೆ.<br><br>ಪ್ರಸ್ತುತ ಕಾಲಘಟ್ಟಕ್ಕೆ ಅನುಗುಣವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಿ ಅಂಡ್ ಆರ್ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಣೆ ಮಾಡುವ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದ್ದು, ಅಂತಿಮ ಹಂತದಲ್ಲಿದೆ. |
| ಆ) | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೌಕರರಿಗೆ ಸಂಬಂಧ ಪಟ್ಟಂತೆ ಕರ್ನಾಟಕ ರಾಜ್ಯ ಸರ್ಕಾರ ಐಎಎಸ್ ನಿವೃತ್ತ ಅಧಿಕಾರಿ ಶ್ರೀನಿವಾಸಮೂರ್ತಿರವರ ನಾಯಕತ್ವ ದಲ್ಲಿ ಸಲಹಾ ಸಮಿತಿಯನ್ನು ರಚಿಸಲಾಗಿತ್ತೆ : ಆಗಿದ್ದಲ್ಲಿ, ಸದರಿ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆಯೇ : | ಶ್ರೀ ಎಂ.ಆರ್.ಶ್ರೀನಿವಾಸಮೂರ್ತಿ, ನಿವೃತ್ತ ಐಎಎಸ್ ಅಧಿಕಾರಿ ಇವರ ಅಧ್ಯಕ್ಷತೆಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪುನರ್ ರಚನಾ ಸಲಹಾ ಸಮಿತಿಯನ್ನು ಸರ್ಕಾರದಿಂದ ರಚಿಸಲಾಗಿತ್ತು.<br><br>ಸದರಿ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ. |
| ಇ) | ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಜಿಲ್ಲಾ ಅಧಿಕಾರಿಗಳನ್ನು ಮತ್ತು ಜಿಲ್ಲಾ ವಾರ್ತಾ ಕಚೇರಿಗಳನ್ನು ಹೊಂದಿರುತ್ತದೆ :<br>ಜಿಲ್ಲಾ ಕಚೇರಿಗಳ ನಿರ್ವಹಣೆಗೆ ಪ್ರತಿ ತಿಂಗಳು ನೀಡುತ್ತಿರುವ ಅನುದಾನವೆಷ್ಟು :ಇದನ್ನು ಹೆಚ್ಚಿಸುವ ಉದ್ದೇಶ ಸರ್ಕಾರದ ಮುಂದೆ ಇರುತ್ತದೆಯೇ : | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಚೇರಿಯನ್ನು ಹೊಂದಿದ್ದು, ಅಧಿಕಾರಿಗಳ ಕೊರತೆಯಿರುವ ಜಿಲ್ಲಾ ಕಚೇರಿಗಳಿಗೆ ಪಕ್ಕದ ಜಿಲ್ಲಾ ಕಚೇರಿಯ ವಾರ್ತಾಧಿಕಾರಿಗಳನ್ನು ಹೆಚ್ಚುವರಿ ಪ್ರಭಾರ ದಲ್ಲಿರಿಸಿ ಕಚೇರಿಯ ದೈನಂದಿನ ಕೆಲಸ ಕಾರ್ಯಗಳನ್ನು ನಿರ್ವಹಿಸಲಾಗುತ್ತಿದೆ.<br><br>ಜಿಲ್ಲಾ ಕಚೇರಿಗಳ ನಿರ್ವಹಣೆಗೆ, ಆಯಾ ವರ್ಷದ ಆಯವ್ಯಯಕ್ಕೆ ಅನುಗುಣವಾಗಿ ಹಾಗೂ ಆಯಾ ಜಿಲ್ಲಾ ಕಚೇರಿಗಳ ಅಗತ್ಯಕ್ಕನುಸಾರ ಅನುದಾನ ವನ್ನು ಬಿಡುಗಡೆ ಮಾಡಲಾಗುತ್ತಿದೆ. |

| | | |
|---|---|---|
| ಈ) | ಇಲಾಖೆಯಲ್ಲಿ ತಾಲ್ಲೂಕು ಕೇಂದ್ರ ಗಳಲ್ಲಿ ಸಹಾಯಕ ನಿರ್ದೇಶಕರನ್ನು ಅಥವಾ ವಾರ್ತಾ ಅಧಿಕಾರಿಗಳನ್ನು ನೇಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ :ಇದ್ದಲ್ಲಿ, ಯಾವಾಗ ಇದನ್ನು ಕಾರ್ಯಗತಗೊಳಿಸ ಲಾಗುವುದು? | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ತಾಲ್ಲೂಕು ಮಟ್ಟದಲ್ಲಿ ಕಚೇರಿಗಳನ್ನು ಹೊಂದಿಲ್ಲದೇ ಇರುವುದರಿಂದ ಇಂತಹ ಯಾವುದೇ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |

**ಕೆಸಿಐ-ಪಿಐಪಿ/23/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ